ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
ಹಾಗೂ ಕಾರ್ಯದರ್ಶಿಗಳು
ಕರ್ನಾಟಕ ರಾಜ್ಯ ಕಟ್ಟಡ ಮತ್ತು
ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

ಕಲ್ಯಾಣ ಸುರಕ್ಷಾ ಭವನ, ಐಟಿಐ ಕಾಲೇಜು ಆವರಣ,
ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029.
ಕಛೇರಿ: 080-29753350
karbuildworkerswelfare@gmail.com

ಸಂಖ್ಯೆ:KBOCWWB/COVID-19/CR-01/2021-22

ದಿನಾಂಕ: 09-11-2021

## ಕಛೇರಿ ಪ್ರಕಟಣೆ

**ವಿಷಯ**: ಕೋವಿಡ್-19 ಸಹಾಯಧನ ದೊರಕದ ಫಲಾನುಭವಿಗಳ ಮಾಹಿತಿಯನ್ನು ನವೆಂಬರ್ 30, 2021 ರೊಳಗೆ ಅಪ್‌ಡೇಟ್ ಮಾಡುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಕೋವಿಡ್-19 ಎರಡನೇ ಅಲೆಯ ಸಹಾಯಧನ ಮೊತ್ತ ರೂ.3000/-ಗಳನ್ನು ಕರ್ನಾಟಕ ಸರ್ಕಾರ ಘೋಷಣೆ ಮಾಡಿರುತ್ತದೆ. ಮುಂದುವರೆದು, ಮಂಡಳಿಯಲ್ಲಿ ನೋಂದಾಯಿತ ಕಾರ್ಮಿಕರಿಗೆ ಈಗಾಗಲೇ ರೂ.3000/- ಗಳ ಮೊತ್ತವನ್ನು ನೇರ ನಗದು ವರ್ಗಾವಣೆ (DBT Aadhaar) ಮೂಲಕ ಪಾವತಿಸಲು E-Governance ಇಲಾಖೆಗೆ ಕಳುಹಿಸಲಾಗಿದ್ದು, ಸದರಿ ಕಳುಹಿಸಲಾದ ಡೇಟಾದಲ್ಲಿ ಶೇ.90 ರಷ್ಟು ಪಾವತಿಯಾಗಿರುತ್ತದೆ ಹಾಗೂ ಉಳಿದ ಶೇ.10 ರಷ್ಟು ಡೇಟಾದಲ್ಲಿ ಫಲಾನುಭವಿ ಆಧಾರ್ ಸಂಖ್ಯೆ ಅವರ ಬ್ಯಾಂಕ್ ಖಾತೆಗೆ ಜೋಡಣೆ ಆಗಿರುವುದಿಲ್ಲ ಹಾಗೂ ಬ್ಯಾಂಕ್‌ನವರು ಸದರಿ ಬ್ಯಾಂಕ್ ಖಾತೆಯನ್ನು NPCI ಗೆ ಮ್ಯಾಪಿಂಗ್ ಮಾಡಿರುವುದಿಲ್ಲ. ಆದಕಾರಣ ಸದರಿಯವರ ಖಾತೆಗೆ ಸಹಾಯಧನ ಮೊತ್ತವು ಪಾವತಿಯಾಗಿರುವುದಿಲ್ಲ.

ಮುಂದುವರೆದು, ಆಧಾರ್ ಸಂಖ್ಯೆ ಬ್ಯಾಂಕ್ ಖಾತೆಗೆ ಜೋಡಣೆ ಆಗದ ಮಾಹಿತಿಯು ಹಾಗೂ ಬ್ಯಾಂಕ್‌ನವರು ಸದರಿ ಬ್ಯಾಂಕ್ ಖಾತೆಯನ್ನು NPCI ಗೆ ಮ್ಯಾಪಿಂಗ್ ಮಾಡದೇ ಇರುವವರ ಮಾಹಿತಿಯು ಮಂಡಳಿಯ ಜಾಲತಾಣದಲ್ಲಿ ಲಭ್ಯವಿದ್ದು, ಸದರಿ ಮಾಹಿತಿಯನ್ನು ಹಾಗೂ ಇನ್ಯಾವುದೇ ಕಾರಣದಿಂದ ಸಹಾಯಧನ ದೊರಕದ ಫಲಾನುಭವಿಗಳ ಮಾಹಿತಿಯನ್ನು ಮಂಡಳಿಯ ಜಾಲತಾಣದಲ್ಲಿ ಅಪ್‌ಡೇಟ್ ಮಾಡಲು ಕೊನೆಯ ದಿನಾಂಕ ನವೆಂಬರ್ 30, 2021 ಆಗಿರುತ್ತದೆ. ತದನಂತರ ಯಾವುದೇ ಅರ್ಜಿಯನ್ನು ಸಹಾಯಧನ ಮಂಜೂರಾತಿಗೆ ಪರಿಗಣಿಸಲಾಗುವುದಿಲ್ಲ ಎಂದು ಈ ಮೂಲಕ ತಿಳಿಸಿದೆ.

(ಅಕ್ರಂ ಪಾಷ., ಭಾ.ಆ.ಸೇ)
ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
ಹಾಗೂ ಕಾರ್ಯದರ್ಶಿಗಳು
ಕ.ಕ&ಇ.ನಿ.ಕಾ.ಕ.ಮಂಡಳಿ, ಬೆಂಗಳೂರು

ಇವರಿಗೆ,
ಎಲ್ಲಾ ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರು/
ಎಲ್ಲಾ ಕಾರ್ಮಿಕ ಅಧಿಕಾರಿಗಳು